# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ರಾಜ್ಯ ಮಟ್ಟದ ಲೆಕ್ಕಪರಿಶೋಧನಾ ವರದಿ ತಯಾರಿಕೆಯ ಸನ್ನದು ಲೆಕ್ಕಿಗರ ಆಯ್ಕೆ ಪ್ರಕ್ರಿಯೆಗೆ ಟೆಂಡರ್ ಕರೆಯುವ ಪ್ರಾಧಿಕಾರ, ಟೆಂಡರ್ ಪರಿಶೀಲನಾ ಪ್ರಾಧಿಕಾರ ಮತ್ತು ಟೆಂಡರ್ ಅಂಗೀಕರಿಸುವ ಪ್ರಾಧಿಕಾರಿಗಳ ನೇಮಕಾತಿ ಮಾಡುವ ಕುರಿತು.

ಪ್ರಸ್ತಾವನೆ:-

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ರಾಜ್ಯ ಮಟ್ಟದ ಲೆಕ್ಕಪರಿಶೋಧನಾ ವರದಿ ತಯಾರಿಕೆಯ ಸನ್ನದು ಲೆಕ್ಕಿಗರ ಆಯ್ಕೆ ಪ್ರಕ್ರಿಯೆ ಸಂಬಂಧ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ ಪ್ರಕರಣ 09 ರನ್ವಯ ಟೆಂಡರ್ ಕರೆಯುವ ಪ್ರಾಧಿಕಾರ (Tender Inviting Authority), ಟೆಂಡರ್ ಪರಿಶೀಲನಾ ಪ್ರಾಧಿಕಾರ (Tender Scrutiny Authority) ಮತ್ತು ಟೆಂಡರ್ ಅಂಗೀಕರಿಸುವ ಪ್ರಾಧಿಕಾರಿಗಳ (Tender Accepting Authority) ನೇಮಕಾತಿ ಮಾಡಲು ತೀರ್ಮಾನಿಸಲಾಗಿದೆ.

ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/268(ಭಾಗ-II)/ಉಖಾಯೋ/2015 ಬೆಂಗಳೂರು, ದಿನಾಂಕ:21.03.2016**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ರಾಜ್ಯ ಮಟ್ಟದ ಲೆಕ್ಕಪರಿಶೋಧನಾ ವರದಿ ತಯಾರಿಕೆಯ ಸನ್ನದು ಲೆಕ್ಕಿಗರ ಆಯ್ಕೆ ಪ್ರಕ್ರಿಯೆ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ ಪ್ರಕರಣ 09 ರನ್ವಯ ಟೆಂಡರ್ ಕರೆಯುವ ಪ್ರಾಧಿಕಾರ (Tender Inviting Authority), ಟೆಂಡರ್ ಪರಿಶೀಲನಾ ಪ್ರಾಧಿಕಾರ (Tender Scrutiny Authority) ಮತ್ತು ಟೆಂಡರ್ ಅಂಗೀಕರಿಸುವ ಪ್ರಾಧಿಕಾರ (Tender Accepting Authority) ಗಳನ್ನು ರಚಿಸಿ ಆದೇಶಿಸಿದೆ.

1. ಟೆಂಡರ್ ಕರೆಯುವ ಪ್ರಾಧಿಕಾರ:- ಜಂಟಿ ನಿರ್ದೇಶಕರು (ಆಡಳಿತ) ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
2. ಟೆಂಡರ್ ಪರಿಶೀಲನಾ ಪ್ರಾಧಿಕಾರ (Tender Scrutiny Authority).

| ಕ್ರ.ಸಂ | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 1 | ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಅಧ್ಯಕ್ಷರು |
| 2 | ವಿಶೇಷ ಆಯುಕ್ತರು, (ನರೇಗಾ) ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 3 | ಜಂಟಿ ನಿರ್ದೇಶಕರು, (ತಾಂತ್ರಿಕ) ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 4 | ಜಂಟಿ ನಿರ್ದೇಶಕರು, (ಆಡಳಿತ) ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 5 | ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

3. ಟೆಂಡರ್ ಅಂಗೀಕಾರ ಪ್ರಾಧಿಕಾರ (Tender Accepting Authority)

| ಕ್ರ.ಸಂ | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 1 | ಆಯುಕ್ತರು ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಅಧ್ಯಕ್ಷರು |
| 2 | ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |

| ಕ್ರ.ಸಂ | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 3 | ವಿಶೇಷ ಆಯುಕ್ತರು, (ನರೇಗಾ) ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 4 | ಆಂತರಿಕ ಆರ್ಥಿಕ ಸಲಹೆಗಾರರು, ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 5 | ಜಂಟಿ ನಿರ್ದೇಶಕರು, (ತಾಂತ್ರಿಕ) ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 6 | ಜಂಟಿ ನಿರ್ದೇಶಕರು, (ಆಡಳಿತ) ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 7 | ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ್ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು.
2. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು.
3. ಸಂಬಂಧಿಸಿದ ಅಧಿಕಾರಿಗಳಿಗೆ.

ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಕಳುಹಿಸಿದೆ,

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
3. ಆಯುಕ್ತರು ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
5. ವಿಶೇಷ ಆಯುಕ್ತರು (ಅರಣ್ಯ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
7. ವಿಶೇಷ ಅಧಿಕಾರಿ ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ Website ನಲ್ಲಿ ಆರೋಹಣ ಮಾಡಲು ಅಗತ್ಯಕ್ರಮಕ್ಕಾಗಿ
8. ಮೆ॥ ಇಫಿಯಾ ಟೆಕ್ನಾಲಜೀಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಇವರ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ತಮ್ಮ Website ನಲ್ಲಿ ಅಳವಡಿಸಲು ಕೋರಿದೆ.